**ಇಂದು ದಿನಾಂಕಃ 10-04-2024 ಸಾಕ್ಷಿಗೆ ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು ವಾದಿ ಪರವಾಗಿ ಶ್ರೀ ಜೆ.ಪಿ.ಎ ವಕೀಲರಿಂದಃ-**

ಈಗ ನೋಡುತ್ತಿರುವ ನಿಡಿ-3 ರ ದಾಖಲೆ ಸೃಷ್ಟಿಸಿರುವ ದಾಖಲೆಯಾಗಿದೆ ಎಂದರೆ ಸರಿಯಲ್ಲ. ನಾನು ಪಂಚಾಯಿತಿಯಿಂದ ಪರವಾನಿಗೆ ಪಡೆಯದೇ ಮನೆ ನಿರ್ಮಾಣ ಮಾಡಿದ ಕಾರಣ ನಿಡಿ-3 ರ ದಾಖಲೆ ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಒತ್ತಾಯ ಪೂರ್ವಕವಾಗಿ ಮನೆ ನಿರ್ಮಾಣ ಮಾಡುತ್ತಿದ್ದೇನೆ ಎಂದು ಪಂಚಾಯಿತಿಯವರು ದಿನಾಂಕ 25-11-2022 ರಂದು ಪೋಲಿಸರಿಗೆ ದೂರು ನೀಡಿದ್ದಾರೆ ಎಂದರೆ ಸರಿಯಲ್ಲ. ಪೊಲೀಸರು ಸ್ಥಳವನ್ನು ಪರಿಶೀಲನೆ ಮಾಡಿದ್ದಾರೆ. ಪೋಲಿಸರು ನನಗೆ

ಪಂಚಾಯಿತಿಯಿಂದ ಪರವಾನಿಗೆ ಪಡೆದು ನಿರ್ಮಾಣ ಮಾಡು ಎಂದು ಹೇಳಿದ್ದಾರೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಪಂಚಾಯಿತಿಯವರು ಮುಂದೆ ನಿಂತು ಮನೆ ನಿರ್ಮಾಣ ಮಾಡಿಸಿದ್ದಾರೆ ಎಂದು ನುಡಿಯುತ್ತಾರೆ. ಪಂಚಾಯಿತಿಯವರು ಮುಂದೆ ನಿಂತು ಮನೆ ನಿರ್ಮಾಣ ಮಾಡಿಸಿದ್ದಾರೆ ಎಂದು ನನ್ನ ಮುಖ್ಯ ವಿಚಾರಣೆಯ ಶಪತ ಪತ್ರದಲ್ಲಿ ಉಲ್ಲೇಖವಿಲ್ಲ.

ಸಾಮಾನ್ಯವಾಗಿ ಪೋಲಿಸರು ಮತ್ತು ಪಂಚಾಯಿತಿಯವರು ಕಾನೂನು ಬಾಹಿರ ಕೃತ್ಯ ಮಾಡು ಎಂದು ಹೇಳುವುದಿಲ್ಲ ಎಂದರೆ ಸಾಕ್ಷಿ ನನ್ನ ಸ್ಥಳದಲ್ಲಿ ನಿರ್ಮಾಣ ಮಾಡಿದ್ದೇನೆ ಎಂದು ನುಡಿಯುತ್ತಾರೆ. ಆ ದಿನ ಬಂದ ಪೋಲಿಸರ ಹೆಸರು ಮತ್ತು ಹುದ್ದೆ ನನಗೆ ಹೇಳಲು ಬರುವುದಿಲ್ಲ. ನಾನು ಕಾನೂನು ಬಾಹಿರವಾಗಿ ಮನೆ ನಿರ್ಮಾಣ ಮಾಡಿದ್ದು ಆದ್ದರಿಂದ ವಾದಿ ಈ ದಾವೆಯನ್ನು ಹೂಡಿದ್ದಾನೆ ಎಂದರೆ ಸರಿಯಲ್ಲ. ನಾನು ಕಾನೂನು ಬಾಹಿರವಾಗಿ ನಿರ್ಮಾಣ ಮಾಡಿದ ಕಾರಣ ಇಲ್ಲಿಯವರೆಗೆ ಸಾಕ್ಷಿದಾರರ ಪಟ್ಟಿ ನ್ಯಾಯಾಲಯಕ್ಕೆ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ನಾನು ಕಾನೂನು ಬಾಹಿರವಾಗಿ ನಿರ್ಮಾಣ ಮಾಡಿಲ್ಲ ಎಂದು ವಕೀಲರಿಗೆ ನೇಮಿಸಿ ಸ್ದಳವನ್ನು ಪರಿಶೀಲನೆ ಮಾಡಬಹುದು.

ನನ್ನ ಜನ್ಮ ದಿನಾಂಕ 03-05-1984 ಇದೆ ಎಂದರೆ ಸರಿಯಲ್ಲ. ನಾನು 7ನೇ ತರಗತಿವರೆಗೆ ಸರಕಾರಿ ಮಾದರಿ ಪ್ರಾಥಮಿಕ ಶಾಲೆ ಐನಾಪುರದಲ್ಲಿ ವಿದ್ಯಾಭ್ಯಾಸ ಮಾಡಿದ್ದೇನೆ ಎಂದರೆ ಸರಿ. ಈಗ ನೋಡುತ್ತಿರುವ ಶಾಲಾ ದೃಢಿಕರಣ ಪತ್ರದಲ್ಲಿ ನನ್ನ ಹೆಸರು ಮತ್ತು ನನ್ನ ಶಾಲೆ ಹೆಸರು ಉಲ್ಲೇಖವಿಲ್ಲ. ಸದರಿ ಶಾಲಾ ದೃಢಿಕರಣ ಪತ್ರವನ್ನು ನಿಪಿ-9 ಎಂದು ಗುರುತಿಸಲಾಯಿತು. 2006 ರಲ್ಲಿ 10-11 ವರ್ಷ ವಯಸ್ಸಿನವನಾಗಿದ್ದೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನಿಪಿ-9 ನ್ನು ಸುಳ್ಳು ಬರೆಸಿಕೊಂಡು ಬಂದಿದ್ದಾರೆ ಎಂದು ನುಡಿಯುತ್ತಾರೆ. ನನ್ನ ಜನ್ಮ ದಿನಾಂಕ ನನಗೆ ಗೊತ್ತಿಲ್ಲ. ನಿಪಿ-9 ರಲ್ಲಿ ಜನ್ಮ ದಿನಾಂಕ ಸರಿಯಾಗಿ ಇದ್ದರು ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ನಿರ್ಮಾಣ ಮಾಡಿರುವ ಕಟ್ಟಡವನ್ನು ತೇರವುಗೊಳಿಸಬೇಕಾಗುತ್ತದೆ ಎಂದು ತಿಳಿದು ಸುಳ್ಳು ಶಪತ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲಾ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು,**
**ಚಿಂಚೋಳಿ**